(18)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃ.ಬೆಂ.ಮ.ಪಾ/ಕಾ.ಪಾ.ಅ/ಯ.ವ/ತಾಂ.ಮಂ / 05 /24-25

ಕಾರ್ಯಪಾಲಕ ಅಭಿಯಂತರು(ವಿ)ರವರ ಕಛೇರಿ
ಬೃ.ಬೆಂ.ಮ.ಪಾ, ಯಲಹಂಕ ವಲಯ
ಬಳ್ಳಾರಿ ರಸ್ತೆ, ಬೆಂಗಳೂರು-92.
ದಿನಾಂಕ: 27.9.2024

ತಾಂತ್ರಿಕ ಮಂಜೂರಾತಿ

ವಿಷಯ:- Operation and Maintenance of park light fittings in Ward No.0.2, 03 & 04 Package Y-15 of Yelahanka Zone for the Period (10 Months).

ಉಲ್ಲೇಖ:- 1. ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/21-22, ದಿನಾಂಕ:18-01-2022 ರ ಮೇರೆಗೆ

2. ಅಂದಾಜು ಮೊತ್ತ: **ರೂ.7.25 ಲಕ್ಷಗಳು**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿದ್ಯುತ್) ಯಲಹಂಕ ವಲಯರವರು ಈ ಮೇಲಿನ ಕಾಮಗಾರಿಗೆ 2024-25 ನೇ ಸಾಲಿನ ಅಯವ್ಯಯದ ಲೆಕ್ಕ ಶಿರ್ಷಿಕೆ-**P0300** ಅಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಯಲಹಂಕ ವಲಯ ವಿದ್ಯುತ್ ವಿಭಾಗಕ್ಕೆ 2024-25 ನೇ ಸಾಲಿನ ಪಿ.ಓ.ಡಬ್ಲ್ಯೂ ಅನುದಾನದಡಿಯಲ್ಲಿ ಉದ್ಯಾನವನ ದೀಪಗಳ ನಿರ್ವಹಣೆಯ ಕಾಮಗಾರಿಗೆ ಕೆ.ಪಿ.ಡಬ್ಲ್ಯೂಡಿ. 2023-24 ವಿದ್ಯುತ್ (ಎಸ್.ಆರ್) ದರಗಳ ಹಾಗೂ ಅನುಮೋದಿತ ದರಗಳ ಅನ್ವಯ ಅಂದಾಜು ಪಟ್ಟಿಯನ್ನು ತಯಾರಿಸಿದೆ.

ಮಾನ್ಯ ಮುಖ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರು 2024-25 ನೇ ಸಾಲಿನ ವಿದ್ಯುತ್ ಕ್ರಿಯಾ ಯೋಜನೆಯನ್ನು ಮಾನ್ಯ ಆಡಳಿತಗಾರರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರು ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ:11-09-2024 ರ ನಡವಳಿಗಳ ವಿಷಯ ಸಂಖ್ಯೆ:167/24-25 ರಲ್ಲಿ ಅನುಮೋದಿಸಿರುವ ಮೇರೆಗೆ ಕೆ.ಪಿ.ಡಬ್ಲ್ಯೂ.ಡಿ(ವಿದ್ಯುತ್) 2023-24 ನೇ ಸಾಲಿನ ಎಸ್.ಆರ್ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಅನುಮೋದಿತ ದರಗಳನ್ನು ಅಳವಡಿಸಿ ಅಂದಾಜು ಪಟ್ಟಿಯನ್ನು ತಯಾರಿಸಿ ತಾಂತ್ರಿಕ ಮಂಜೂರಾತಿ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/21-22, ದಿನಾಂಕ:18-01-2022 ರ ಮೇರೆಗೆ ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದ್ದು, ತಾಂತ್ರಿಕ ಮಂಜೂರಾತಿಯ ಪುಟ ಸಂಖ್ಯೆ:130&131 ಕ್ರ.ಸಂ.05 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:-

1. ಅಂದಾಜು ಪಟ್ಟಿಯ ಮೊತ್ತ ರೂ.1.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ನಮೂದಿಸಿಕೊಳ್ಳುವುದು.
3. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೇಟಾ ದರವನ್ನು ತಯಾರಿಸಿ, ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು (ವಿದ್ಯುತ್)
ಬೃ.ಬೆಂ.ಮ.ಪಾ. ಯಲಹಂಕ ವಲಯ

ಪ್ರತಿಯನ್ನು:

1. ಅಧೀಕ್ಷಕ ಅಭಿಯಂತರರು (ವಿ) ರವರ ಮಾಹಿತಿಗಾಗಿ ಕಳುಹಿಸಿದೆ.
2. ಕಛೇರಿ ಕಡತಕ್ಕೆ.